# ‘ಸರ್ಕಾರ ಸಂಸ್ಕೃತಕ್ಕೆ ಉತ್ತೇಜನ ನೀಡಲಿ’

ಪ್ರಜಾವಾಣಿ ವಾರ್ತೆ

ಶಿರಸಿ: ಸರ್ಕಾರದಿಂದ ಸಂಸ್ಕೃತ ಕ್ಷೇತ್ರಕ್ಕೆ ಮತ್ತಷ್ಟು ಉತ್ತೇಜನ ನೀಡಬೇಕು. ಈ ಪ್ರೋತ್ಸಾಹ ನೀಡುವಲ್ಲಿ ಎದುರಾಗುವ ಅಡಚಣೆ ದೂರವಾಗಬೇಕು ಎಂದು ಸ್ವರ್ಣವಲ್ಲೀ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಹೇಳಿದರು.

ಅವರು ಶನಿವಾರ ನಗರದ ರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಂಸ್ಕೃತ ಅಧ್ಯಾಪಕರ ಸಂಘದ ಶಿರಸಿ ಶೈಕ್ಷಣಿಕ ಜಿಲ್ಲಾ ಘಟಕ ಹಮ್ಮಿಕೊಂಡ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ಸಂಸ್ಕೃತ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಸಮಾರಂಭದ ಸಾನ್ನಿಧ್ಯ ನೀಡಿ ಆಶೀರ್ವದಿಸಿದರು.

ಪ್ರೌಢಶಾಲಾ ಹಂತದಲ್ಲಿ ಸಂಸ್ಕೃತ ವಿಷಯ ತೆಗೆದುಕೊಳ್ಳುವ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಆಗಿದೆ. ಸಂಸ್ಕೃತ ಓದುವವರಿಗೆ ಉತ್ತೇಜನ ನೀಡಲು ಇಂಥ ಕಾರ್ಯಕ್ರಮ ಪ್ರಶಸ್ತ ಎಂದರು.



ಕರ್ನಾಟಕ ರಾಜ್ಯ ಪ್ರೌಢಶಾಲಾ ಸಂಸ್ಕೃತ ಅಧ್ಯಾಪಕರ ಸಂಘದ ಶಿರಸಿ ಶೈಕ್ಷಣಿಕ ಜಿಲ್ಲಾ ಘಟಕ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಪುರಸ್ಕರಿಸಿದರು.ಎನ್‌. ಆರ್‌. ಹೆಗಡೆ, ಪ್ರಸನ್ನ ಹೆಗಡೆ, ರಾಮಚಂದ್ರ ಭಟ್‌ ಉಮ್ಮಚಗಿ, ವೆಂಕಟರಮಣ ಭಟ್‌ ಇದ್ದರು

ಸಂಸ್ಕೃತಕ್ಕೆ ಸರ್ಕಾರದ ಕಡೆಯಿಂದ ಉತ್ತೇಜನ ಕೊಡುವ ಅಗತ್ಯತೆ ಇದೆ. ಪ್ರೌಢಶಾಲಾ ಹಂತದಲ್ಲಿ ಸಂಸ್ಕೃತ ಮುಂದುವರಿಸುವುದೇ ಕಷ್ಟ ಎಂಬ ಸಂಗತಿ ಇದೆ. ಸಂಸ್ಕೃತ ಸಾಹಿತ್ಯ ಅರಿತರೆ ಉದ್ಯೋಗ ನಿರೀಕ್ಷೆ ಕಡಿಮೆ ಇದ್ದರೂ ಬದುಕಿಗೆ ಬರುತ್ತದೆ ಎಂದ ಅವರು, ಸಂಸ್ಕೃತ ಓದಿದವರಿಗೆ ಹೆಚ್ಚಿನ ಹೊಣೆಗಾರಿಕೆ ಕೂಡ ಸಮಾಜದಲ್ಲಿದೆ ಎಂದರು.

ಸಂಸ್ಕೃತದೊಳಗಿನ ವಿಷಯ ಓದಿ ತಿಳಿದು ಸಮಾಜಕ್ಕೆ ಹೇಳುವ ಕಾರ್ಯ ಆಗಬೇಕು. ಸಂಸ್ಕೃತದಲ್ಲಿ ಅನೇಕ ಪ್ರಾಚೀನ ಭಾರತೀಯ ಜೀವನ ದೃಷ್ಟಿಕೋನ ಸಿಗಲಿದೆ ಎಂದ ಅವರು, ಸಂಸ್ಕೃತ ಪ್ರೌಢಶಾಲಾ ಹಂತದಲ್ಲಿ ಓದುತ್ತಾರೆ. ಅದನ್ನು ಮುಂದೆ ಕೂಡ ಇಟ್ಟು ಕೊಳ್ಳಬೇಕು. ಇಲ್ಲವಾದರೆ ಒಂದು ಹಂತದಲ್ಲಿ ಓದಿದ್ದಷ್ಟೇ ಆಗುತ್ತದೆ. ಅದರ ಆಳಕ್ಕೆ ಇಳಿಯಲು ಆಗದು ಎಂದರು.

ಬಿಇಒಗಳಾದ ಎನ್‌.ಆರ್‌.ಹೆಗಡೆ, ಶಿಕ್ಷಣ ಸಂಯೋಜಕ ಪ್ರಸನ್ನ ಹೆಗಡೆ, ವಿ.ರಾಮಚಂದ್ರ ಭಟ್‌ ಉಮ್ಮಚಗಿ, ಸಂಸ್ಕೃತ ವಿಷಯ ಪರಿವೀಕ್ಷಕ ವೆಂಕಟರಮಣ ಭಟ್‌, ರಾಜ್ಯ ಸಂಘದ ಅಧ್ಯಕ್ಷ ಕೃಷ್ಣ ಭಟ್‌ ಭಾಗವಹಿಸಿದ್ದರು. ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಗಿರೀಶ ಹೆಗಡೆ, ರಾಜಾರಾಮ ದೀಕ್ಷಿತ, ಕೆ.ಎಸ್‌. ವಿಘ್ನೇಶ್ವರ, ಗಣಪತಿ ಜೋಶಿ, ರಮಾಕಾಂತ ಭಟ್‌, ವಿನಾಯಕ ಹೆಗಡೆ, ಕೃಷ್ಣಮೂರ್ತಿ ಭಟ್‌ ಇತರ ಪದಾಧಿಕಾರಿಗಳು ವಿವಿಧ ಜವಾಬ್ದಾರಿ ನಿರ್ವಹಿಸಿದರು.